168

# ಕರ್ನಾಟಕ ಸರ್ಕಾರದ ನಡವಳಿಗಳು

ಸಂ. 1962
27/6/13

ವಿಷಯ: ಮೆ: ವೆಲ್‌ಸ್ಪನ್ ರಿನಿವೇಬಲ್ಸ್ ಎನರ್ಜಿ ಲಿಮಿಟೆಡ್ (M/s. Welspun Renewables Energy Limited) ಕಂಪನಿಗೆ 100 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಘಟಕ ಸ್ಥಾಪಿಸಲು ಅನುಮತಿ ನೀಡುವ ಬಗ್ಗೆ.

27/6 AGM-SG

ಓದಲಾಗಿದೆ: ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರ ಪತ್ರ ಸಂಖ್ಯೆ: ಕೆಆರ್‌ಇಡಿ/08/SRR/WREL-100MW (50+50)/Bijapura/2013/1234 ದಿನಾಂಕ 25/28.05.2013.

* * *

ಪ್ರಸ್ತಾವನೆ :-

ಮೇಲೆ ಓದಲಾದ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಮೆ: ವೆಲ್‌ಸ್ಪನ್ ರಿನಿವೇಬಲ್ಸ್ ಎನರ್ಜಿ ಲಿಮಿಟೆಡ್ (M/s. Welspun Renewables Energy Limited) ಇವರಿಗೆ ಬಿಜಾಪುರ ಜಿಲ್ಲೆಯ ಬಸವನಬಾಗೇವಾಡಿ ತಾಲ್ಲೂಕಿನ ಮಾಲ್ಗನ್‌ಕೆರೆ, ಕಲಗರ್ಕಿ ಮತ್ತು ಮಸೂತಿ ಗ್ರಾಮಗಳಲ್ಲಿ 50 ಮೆ.ವ್ಯಾ. ಹಾಗೂ ಬಿಜಾಪುರ ಜಿಲ್ಲೆಯ ಬಸವನಬಾಗೇವಾಡಿ ತಾಲ್ಲೂಕಿನ ಸುತ್ತ ಮುತ್ತಲಿನ ಗ್ರಾಮಗಳಾದ ಹತ್ತರ್ಕಿಹಾಳ್, ಮನಗೂಳಿ, ನಂದಿಹಾಳ್ ಮತ್ತು ಇಸ್ಲಾಂಪುರ ತಾಂಡ ಗ್ರಾಮಗಳಲ್ಲಿ 50 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗಳು ಸೇರಿ ಒಟ್ಟು 100 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನಾ ಘಟಕ ಸ್ಥಾಪಿಸಲು ದಿನಾಂಕ 07.07.2012ರಂದು ನಡೆದ ಹಂಚಿಕೆ ಸಮಿತಿ ಸಭೆಯ ನಿರ್ಣಯದಂತೆ ಒಂದು ವರ್ಷದಲ್ಲಿ ಡಿಪಿಆರ್ ತಯಾರಿಸಿ ಸಲ್ಲಿಸಬೇಕೆಂಬ ಷರತ್ತಿಗೊಳಪಟ್ಟು ತತ್ವತಃ ಅನುಮತಿ ನೀಡಲಾಗಿದ್ದು, ಅದರಂತೆ, ಅಭಿವೃದ್ಧಿದಾರರು ಸದರಿ ಸಾಮರ್ಥ್ಯಕ್ಕೆ ವಿಸ್ತೃತ ಯೋಜನಾ ವರದಿಯನ್ನು ಸಲ್ಲಿಸಿದ್ದು, ಯೋಜನೆಯು ಖಾಸಗಿ ಪ್ರದೇಶದಲ್ಲಿ ಬರುತ್ತಿರುವುದಾಗಿ, ಯೋಜನೆಯಿಂದ ಉತ್ಪಾದನೆ ಆಗುವ ವಿದ್ಯುತ್ತನ್ನು ಸಂಬಂಧಿಸಿದ ವಿದ್ಯುತ್ ಸರಬರಾಜು ಕಂಪನಿಯೊಂದಿಗೆ ವಿದ್ಯುತ್ ಖರೀದಿ ಒಪ್ಪಂದ ಮಾಡಿಕೊಳ್ಳುವ ಷರತ್ತಿಗೊಳಪಟ್ಟು ಹಂಚಿಕೆ ಆದೇಶ ನೀಡಬಹುದೆಂದು ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಲಾಗಿದೆ : -

**ಸರ್ಕಾರಿ ಆದೇಶ ಸಂಖ್ಯೆ : ಇಎನ್ 161 ಎನ್‌ಸಿಇ 2013,**
**ಬೆಂಗಳೂರು, ದಿನಾಂಕ : 15.06.2013.**

ಮೆ: ವೆಲ್‌ಸ್ಪನ್ ರಿನಿವೇಬಲ್ಸ್ ಎನರ್ಜಿ ಲಿಮಿಟೆಡ್ (M/s. Welspun Renewables Energy Limited) ಇವರಿಗೆ ಬಿಜಾಪುರ ಜಿಲ್ಲೆಯ ಬಸವನಬಾಗೇವಾಡಿ ತಾಲ್ಲೂಕಿನ ಮಾಲ್ಗನ್‌ಕೆರೆ, ಕಲಗರ್ಕಿ ಮತ್ತು ಮಸೂತಿ ಗ್ರಾಮಗಳಲ್ಲಿ 50 ಮೆ.ವ್ಯಾ. ಹಾಗೂ ಬಿಜಾಪುರ ಜಿಲ್ಲೆಯ ಬಸವನಬಾಗೇವಾಡಿ ತಾಲ್ಲೂಕಿನ ಸುತ್ತ ಮುತ್ತಲಿನ ಗ್ರಾಮಗಳಾದ ಹತ್ತರ್ಕಿಹಾಳ್, ಮನಗೂಳಿ, ನಂದಿಹಾಳ್ ಮತ್ತು ಇಸ್ಲಾಂಪುರ ತಾಂಡ ಗ್ರಾಮಗಳಲ್ಲಿ 50 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗಳು ಸೇರಿ ಒಟ್ಟು 100 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಘಟಕ ಸ್ಥಾಪಿಸಲು ಈ ಕೆಳಗಿನ ಶೆಡ್ಯೂಲ್‌ನಲ್ಲಿ ವಿವರಿಸಿರುವಂತೆ ಹಾಗೂ ಈ ಕೆಳಕಂಡ ಷರತ್ತಿಗೊಳಪಟ್ಟು ಅನುಮತಿ ನೀಡಲಾಗಿದೆ:-

Wind Section
Inward No. 1318 S
Date: 29/06/13
Sig.

167



| Sl. No. | Toposheet No. | Proposed capacity in MW | Near by villages of the proposed area and district. | Geographical area description of the project |
|---|---|---|---|---|
| 1 | 47 P/14 | 50 MW (25 Nos x 2000 kW) | Malghankere, Kalgurki and Masuti Villages in Basavanabagewadi Taluk, Bijapur District. | The identified area is covered in Private land. Also covered with several water bodies and crossing of powerline Kallari halla and stony wastes. The road crossing towards Malghan from Masuti. The area is held in the following Geographical Co-ordinates:<br>**Latitude** : 16°30'0"- 16°34'34" N<br>**Longitude** :75°45'0"- 75°47'33" E<br>**Ridge peaks :** 623, 608, 599, 604, 561, 572 and 577m AMSL |
| 2 | 47 P/14 | 50 MW (25 Nos x 2000 kW) | Hattarkihal, Nandihal, Mangoli and Islampur Tanda Villages of Basavanabagewadi Taluk, Bijapur District | The identified area is covered in Private land, nea Mangoli. A stream is connecting to Sanna Don River. The area is held in the following Geographical Co-ordinates:<br>**Latitude** : 16°38'9"- 16°40'0" N<br>**Longitude** :75°50'0"- 75°53'55" E<br>**Ridge peaks :** 618, 596, 582 and 580m AMSL |
| | | **100 MW** | | |

1. ಈ ಯೋಜನೆಯನ್ನು ಸರ್ಕಾರಿ ಆದೇಶ ಸಂಖ್ಯೆ: ಇಎನ್ 354 ಎನ್‌ಸಿಇ 2008 ದಿನಾಂಕ: 19.01.2010 ಹಾಗೂ ತಿದ್ದುಪಡಿ ಆದೇಶ ಸಂಖ್ಯೆ: ಇಎನ್ 07 ಎನ್‌ಸಿಇ 2011 ದಿನಾಂಕ 17.8.2011ರಲ್ಲಿ ನಿಗದಿಪಡಿಸಿರುವ ಅವಧಿಯೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು.

2. ಈ ಆದೇಶ ಹೊರಡಿಸಿದ ದಿನಾಂಕದಿಂದ 45 ದಿನಗಳ ಒಳಗಾಗಿ ಸರ್ಕಾರಿ ಆದೇಶ ಸಂಖ್ಯೆ ಇಎನ್ 435 ಎನ್‌ಸಿಇ 2011 ದಿನಾಂಕ 06.1.2012 ರನ್ವಯ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು. ತಪ್ಪಿದಲ್ಲಿ ಈ ಹಂಚಿಕೆ ಆದೇಶ ತಂತಾನೆ ರದ್ದಾಗಿದೆ ಎಂದು ಭಾವಿಸುವುದು.

3. ಹಂಚಿಕೆದಾರರು ಪೂರ್ತಿ ಒಂದು ಪವನ ವರ್ಷಕ್ಕೆ ಕಡಿಮೆ ಇಲ್ಲದಂತೆ 10 ಮೀಟರ್ ಮತ್ತು ಹಬ್ ಹೈಟ್ ಮಟ್ಟದಲ್ಲಿ ಪವನ ವೇಗದ ಅಳತೆಯನ್ನು ಮಾಡಿಕೊಳ್ಳಬೇಕು. ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದಿಂದ ಹೊರಡಿಸತಕ್ಕ ಮಾರ್ಗಸೂಚಿಗಳಿಗನುಗುಣವಾಗಿ ಮೈಕ್ರೊ ಸೈಟಿಂಗ್ ಮಾಡಿರುವ ಅಂಶಗಳನ್ನೊಳಗೊಂಡ ವಿವರವಾದ ಯೋಜನಾ ವರದಿಯನ್ನು ಒಂದು ವರ್ಷದಲ್ಲಿ ತಯಾರಿಸಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ತ್ರಿಪ್ರತಿಗಳಲ್ಲಿ ಸಲ್ಲಿಸಬೇಕು. ತಾಂತ್ರಿಕ ಅವಶ್ಯಕತೆ ಮತ್ತು ಹೆಚ್ಚಿನ ವಿದ್ಯುತ್ ಉತ್ಪಾದನೆಯನ್ನು ಸೇಫ್ಟಕ್ಕೆ ಮತ್ತು ವಿಂಡ್ ಫಾರ್ಮನ ಲೇಔಟ್‌ನ ಬದಲಾವಣೆಗನುಗುಣವಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ಶಿಫಾರಸ್ಸಿನಂತೆ ಇದೆ ಎಂಬುದನ್ನು ಖಾತರಿ ಪಡಿಸಬೇಕು.

.........3

4. ಗಾಳಿ ಚಕ್ರದ ಹಬ್ ಹೈಟನಲ್ಲಿ ಪವನ ವೇಗದ ಅಳತೆ ಖಾತರಿ ಪಡಿಸಲು ಕೆಳಗಿನ ಕೋಷ್ಟಕದಲ್ಲಿ ವಿವರಿಸಿರುವಂತೆ ಪ್ರತಿ 5 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ ಒಂದರಂತೆ ಗಾಳಿ ಕಂಬವನ್ನು (ವಿಂಡ್ ಮಾಸ್ಟ್) ಅಳವಡಿಸಬೇಕು. ಅಳತೆ ವಿವರಗಳನ್ನು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸುವುದು.

| ಗಾಳಿ ಶಕ್ತಿ ವಿದ್ಯುತ್ತಿನ ದೂರ ಸಾಮರ್ಥ್ಯ | 5 ಮೆಗಾವ್ಯಾಟ್ ಗಾಳಿ ಯೋಜನೆಯಲ್ಲಿ ಸಾಧಾರಣ ಗಾಳಿ ಶಕ್ತಿ ವಿದ್ಯುತ್ತಿನ ಸಂಖ್ಯೆ | ಹಾಕಬೇಕಾಗಿರುವ ಗಾಳಿ ಕಂಬ (ವಿಂಡ್ ಮಾಸ್ಟ್‌ಗಳ ಸಂಖ್ಯೆ |
|---|---|---|
| > 200 ಕಿ.ವ್ಯಾ. ನಿಂದ 300 ಕಿ.ವ್ಯಾ. | 18 | 1 |
| > 300 ಕಿ.ವ್ಯಾ. ನಿಂದ 500 ಕಿ.ವ್ಯಾ. | 15 | 1 |
| > 500 ಕಿ.ವ್ಯಾ. ನಿಂದ 750 ಕಿ.ವ್ಯಾ. | 12 | 1 |
| > 750 ಕಿ.ವ್ಯಾ. ನಿಂದ 1000 ಕಿ.ವ್ಯಾ. | 8 ರಿಂದ 10 | 1 |

5. ಯೋಜನೆಯ ವಿವಿಧ ಹಂತದ ಚಟುವಟಿಕೆಗಳು ಹಾಗೂ ಯೋಜನೆಗಳಿಂದ ಪ್ರಾರಂಭದ ಹಂತದ ತನಕ ವಿವಿಧ ಮೈಲುಗಲ್ಲುಗಳನ್ನು ತೋರಿಸುವ ಪರ್ಟ್ ನಕ್ಷೆಯನ್ನು ತಯಾರಿಸಿ ಮೇಲುಸ್ತುವಾರಿಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸಬೇಕು.

6. ಎಲ್ಲೆಲ್ಲಿ ಶಾಸನಬದ್ಧ ಅನುಮೋದನೆ ಅವಶ್ಯಕತೆಯಿದೆಯೋ ಅಂದರೆ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ/ಕಂದಾಯ ಇಲಾಖೆಗಳ ಮತ್ತು ಇತರ ಸಂಬಂಧಿತ ಇಲಾಖೆಗಳಿಂದ ಅನುಮೋದನೆಯನ್ನು ಹಂಚಿಕೆದಾರರು ಪಡೆದುಕೊಳ್ಳತಕ್ಕದ್ದು. ಅಭಿವೃದ್ಧಿದಾರರು ಈ ಯೋಜನೆಯನ್ನು ಖಾಸಗಿ ಜಮೀನಿನಲ್ಲಿ ಕೈಗೊಳ್ಳುತ್ತಿರುವುದರಿಂದ. ಖಾಸಗಿ ಜಮೀನಿನ ಮಾಲೀಕರಿಂದ ಒಪ್ಪಿಗೆ ಪತ್ರವನ್ನು ಪಡೆಯತಕ್ಕದ್ದು.

7. ಅಭಿವೃದ್ಧಿದಾರರು ಸಂಬಂಧಿಸಿದ ವಿದ್ಯುತ್ ಸರಬರಾಜು ಕಂಪನಿಯೊಂದಿಗೆ ನೀತಿ ನಿಯಮಾನುಸಾರ ವಿದ್ಯುತ್ ಖರೀದಿ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.

8. ಸರ್ಕಾರಿ ಆದೇಶ ಸಂ:ಇಎನ್ 95 ಇಬಿಎಸ್ 2009 ದಿ:29.12.2009ರನ್ವಯ ವಿನಾಯಿತಿ ಸೌಲಭ್ಯಗಳು ಅನ್ವಯಿಸುವುದು.

9. ಯೋಜನೆಯನ್ನು ತ್ವರಿತವಾಗಿ ಅನುಷ್ಠಾನ ಮಾಡಲು ಅನುವಾಗುವಂತೆ ರಾಜ್ಯ ಮತ್ತು ಜಿಲ್ಲಾ ಮಟ್ಟದ ಸರ್ಕಾರಿ ಅಧಿಕಾರಿಗಳು ಸಹಕರಿಸುವುದು.

10. ಸದರಿ ಪವನ ವಿದ್ಯುತ್ ಯೋಜನೆಗಾಗಿ ಇಂಧನ ಇಲಾಖೆಯಿಂದ ಜಮೀನನ್ನು ಹಂಚಿಕೆ ಮಾಡಲಾಗುವುದಿಲ್ಲ ಹಾಗೂ ಈ ಹಂಚಿಕೆ ಆದೇಶವು ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯದ ಹಂಚಿಕೆಗೆ ಮಾತ್ರ ಸೀಮಿತವಾಗಿದೆ ಹಾಗೂ ಅಭಿವೃದ್ಧಿದಾರರಿಗೆ ಯೋಜನೆಯ ಜಾಗದಲ್ಲಿಯ ಖನಿಜ ಸಂಪತ್ತು ಹಾಗೂ ಭೂಮಿಯ ಬಗ್ಗೆ ಯಾವುದೇ ಹಕ್ಕು ಇರುವುದಿಲ್ಲ ಎಂಬುದನ್ನು ಮನಗಾಣತಕ್ಕದ್ದು.

11. ಸದರಿ ಆದೇಶವನ್ನು ರದ್ದುಪಡಿಸುವ/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎ.ಎ.ಚಪ್ಪರಬಂದ್),
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.

ಇವರಿಗೆ:
ಸಂಕಲನಕಾರರು, ರಾಜ್ಯಪತ್ರ, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಪ್ರಕಟಣೆಗಾಗಿ.

.........4

165



**ಪ್ರತಿ :**

1 ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ ಮತ್ತು ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸ ಸೌಧ, ಬೆಂಗಳೂರು-1.

2 ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.

3 ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು

4 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.

5 ವ್ಯವಸ್ಥಾಪಕ ನಿರ್ದೇಶಕರು, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ, ಕಾರ್ಪೋರೇಟ್ ಕಛೇರಿ, ನವನಗರ, ಹುಬ್ಬಳ್ಳಿ-580 025.

6 ಜಿಲ್ಲಾಧಿಕಾರಿಗಳು, ಬಿಜಾಪುರ ಜಿಲ್ಲೆ, ಬಿಜಾಪುರ.

7 ಉಪ ಅರಣ್ಯ ಸಂರಕ್ಷಣಾಧಿಕಾರಿ ಬಿಜಾಪುರ ಜಿಲ್ಲೆ, ಬಿಜಾಪುರ

8 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ನಂ. 39, 'ಶಾಂತಿಗೃಹ', ಭಾರತ್ ಸ್ಕೌಟ್ಸ್ & ಗೈಡ್ಸ್ ಬಿಲ್ಡಿಂಗ್, ಅರಮನೆರಸ್ತೆ, ಮಹಾರಾಣಿ ಕಾಲೇಜಿನ ಹಿಂಭಾಗ, ಬೆಂಗಳೂರು-1.

9 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.

10 ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.

11 M/s. Welspun Renewables Energy Limited, 3rd Floor, Press Trust of India Building, 4, Parliment Street, New Delhi – 110 001.

12 ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.